ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

Only
Kaveri Bhavan

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ದಿನಾಂಕ : 2 FEB 2022

ಕವಿಪ್ರನಿನಿ/ಬಿ9/21480/21-22

## ಸುತ್ತೋಲೆ

**ವಿಷಯ:-** ಮಹಿಳಾ ಸರ್ಕಾರಿ ನೌಕರರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ.

**ಉಲ್ಲೇಖ:-**
1. ಸರ್ಕಾರದ ಅಧೀನ ಕಾರ್ಯದರ್ಶಿ ಸಿಆಸುಇ (ರಾಜಕೀಯ) ರವರ ಸುತ್ತೋಲೆ ಸಂಖ್ಯೆ ಸಿಆಸುಇ 103 ರಾಸ 2021 ದಿನಾಂಕ 22/12/2021.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇಂಧನ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ ಎನರ್ಜಿ 290 ಸಿಓಆರ್‌ಡಿ 2021 ದಿನಾಂಕ 06/01/2022.

ಸರ್ಕಾರದ ಅಧೀನ ಕಾರ್ಯದರ್ಶಿ ಸಿಆಸುಇ (ರಾಜಕೀಯ) ರವರ ಉಲ್ಲೇಖ (1) ಸುತ್ತೋಲೆಯಲ್ಲಿ ರಾಜ್ಯ ಸರ್ಕಾರದ ಮಹಿಳಾ ನೌಕರರು ಕರ್ತವ್ಯ ನಿರ್ವಹಿಸುತ್ತಿರುವ ಕಚೇರಿಗಳಲ್ಲಿ ಕೆಲವು ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಮುಜುಗರಕ್ಕೆ ಒಳಗಾಗಿರುವ ಪರಿಸ್ಥಿತಿ ಇದ್ದು, ಕೆಲವು ಕಡೆ ಶೌಚಾಲಯಗಳಿದ್ದು ಸುಸ್ಥಿತಿಯಲ್ಲಿ ಇರುವುದಿಲ್ಲ. ಇನ್ನೂ ಕೆಲವು ಕಡೆ ಶೌಚಾಲಯಗಳು ಇರುವುದಿಲ್ಲ. ಆದ್ದರಿಂದ ರಾಜ್ಯ ಸರ್ಕಾರದ ಎಲ್ಲಾ ಕಚೇರಿಗಳಲ್ಲಿ ಮಹಿಳಾ ನೌಕರರಿಗೆ ಉಂಟಾಗುತ್ತಿರುವ ಮುಜುಗರವನ್ನು ತಪ್ಪಿಸುವ ನಿಟ್ಟಿನಲ್ಲಿ ಮಹಿಳಾ ನೌಕರರಿಗೆ ಪ್ರತ್ಯೇಕವಾಗಿ ಸುಸಜ್ಜಿತ, ಸ್ವಚ್ಛ, ಸುರಕ್ಷಿತ ಶೌಚಾಲಯಗಳನ್ನು ನಿರ್ಮಿಸುವುದು ಅತ್ಯವಶ್ಯಕವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಮಹಿಳಾ ನೌಕರರಿಗೆ ರಾಜ್ಯ ಸರ್ಕಾರದ ಎಲ್ಲಾ ಕಚೇರಿಗಳಲ್ಲಿ ಮಹಿಳಾ ನೌಕರರಿಗೆ ಪ್ರತ್ಯೇಕವಾಗಿ ಸ್ವಚ್ಛ ಮತ್ತು ಸುರಕ್ಷಿತ ಶೌಚಾಲಯಗಳನ್ನು ನಿರ್ಮಿಸಲು ಕೂಡಲೆ ಕ್ರಮ ವಹಿಸುವಂತೆ ತಿಳಿಸಲಾಗಿದೆ. ಸದರಿ ಸುತ್ತೋಲೆಯನ್ನು ಉಲ್ಲೇಖ (2) ರ ಪತ್ರದಲ್ಲಿ ನಿಯಮಾನುಸಾರ ಕ್ರಮಕೈಗೊಳ್ಳಲು ನಿಗಮ ಕಾರ್ಯಾಲಯಕ್ಕೆ ಕಳುಹಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಕವಿಪ್ರನಿನಿಯ ರಾಜ್ಯಾದ್ಯಂತ ಇರುವ ಕಚೇರಿ ಕಟ್ಟಡಗಳು, ತರಬೇತಿ ಕೇಂದ್ರ, ನಿಯಂತ್ರಣಾ ಕೊಠಡಿಗಳು ಹಾಗೂ ಇತರೆ ವಸತಿಯೇತರ ಕಟ್ಟಡಗಳಲ್ಲಿ ಮಹಿಳಾ ನೌಕರರಿಗೆ ಪ್ರತ್ಯೇಕವಾಗಿ ಶೌಚಾಲಯಗಳಿಲ್ಲದಿದ್ದಲ್ಲಿ ಅವುಗಳನ್ನು ನಿರ್ಮಿಸಲು ಕೂಡಲೆ ಅಗತ್ಯ ಕ್ರಮಕೈಗೊಳ್ಳುವುದು ಹಾಗೂ ಹಾಲಿ ಇರುವ ಎಲ್ಲಾ ಶೌಚಾಲಯಗಳನ್ನು ಸದಾಕಾಲ ಸುಸ್ಥಿತಿಯಲ್ಲಿಡಲು ಕ್ರಮಕೈಗೊಳ್ಳುವುದು.

B.R.H 2/2/22
ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
ಕವಿಪ್ರನಿನಿ. ಬೆಂಗಳೂರು.

**ಪ್ರತಿಗಳು:-**

1. ಎಲ್ಲಾ ಮುಖ್ಯ ಇಂಜಿನಿಯರುಗಳು (ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ಎಲ್ಲಾ ಅಧೀಕ್ಷಕ ಇಂಜಿನಿಯರುಗಳು (ವಿ)/ (ಸಿ), ಕವಿಪ್ರನಿನಿ.
4. ಅಧೀಕ್ಷಕ ಇಂಜಿನಿಯರ್ (ವಿ), (ಐಟಿ ಮತ್ತು ಎಂಐಎಸ್), ಕವಿಪ್ರನಿನಿ, ಕಾವೇರಿ ಭವನ, ಸದರಿ ಸುತ್ತೋಲೆಯನ್ನು ನಿಗಮದ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಕೋರಿದೆ.
5. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರುಗಳು (ವಿ) / (ಸಿವಿಲ್), ಕವಿಪ್ರನಿನಿ.
6. ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಪ್ರಸರಣ)/ (ಹಣಕಾಸು)/ (ಆ ಮತ್ತು ಮಾ.ಸಂ) ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

AEES 3/2/22